JULY 24, 2025

# AKASHAVANI - DHARWAD
# PRADESH SAMACHARA (KANNADA) 12.00 P.M.

<><><>

**ಪ್ರಸಾರ ಭಾರತಿ, ಆಕಾಶವಾಣಿ**

**ಧಾರವಾಡ**

**ಪ್ರದೇಶ ಸಮಾಚಾರ**

**<><><>**

**1.** ವಿದ್ಯುತ್ ಉತ್ಪಾದನೆಯಲ್ಲಿ, ಕರ್ನಾಟಕ ರಾಜ್ಯ ಸ್ವಾವಲಂಬಿಯಾಗಿದೆ; ಈ ಸಾಧನೆಯಲ್ಲಿ, ಕರ್ನಾಟಕ ವಿದ್ಯುಚ್ಛಕ್ತಿ ನಿಗಮ ನಿಯಮಿತ – ಕೆ.ಪಿ.ಸಿ.ಎಲ್. ನೌಕರರ ಅಪಾರ ಶ್ರಮವಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಶ್ಲಾಘಿಸಿದ್ದಾರೆ. ಬೆಂಗಳೂರಿನಲ್ಲಿ, ವಿದ್ಯುತ್ ನಿಗಮ ನಿಯಮಿತದ 56ನೇ ಸಂಸ್ಥಾಪನಾ ದಿನಾಚರಣೆ, ಉದ್ಘಾಟಿಸಿ ಅವರು ಮಾತನಾಡಿದರು. ಪವನ, ಸೌರ, ಉ ಷ್ಣ, ಜಲ ವಿದ್ಯುತ್ ಉತ್ಪಾದನೆ ಜೊತೆಗೆ, ತ್ಯಾಜ್ಯದಿಂದಲೂ ವಿದ್ಯುತ್ ಉತ್ಪಾದಿಸಿ, ದೇಶದಲ್ಲೇ ಕರ್ನಾಟಕ ಪ್ರಮುಖ ಸ್ಥಾನದಲ್ಲಿದೆ. 60 ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆ ಗುರಿ ಸಾಧನೆಯತ್ತ ನಾವು ಸಾಗುತ್ತಿದ್ದೇವೆ ಎಂದರು. ಇಂಧನ ಖಾತೆ ಸಚಿವ ಕೆ.ಜೆ.ಜಾರ್ಜ್ ಸೇರಿದಂತೆ, ಗಣ್ಯರು ಪಾಲ್ಗೊಂಡಿದ್ದರು.

<><><>

**2.** ಮಹಾದಾಯಿ ಯೋಜನೆ ಜಾರಿ ಕುರಿತಂತೆ, ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ ಅವರು, ಅಲ್ಲಿನ ವಿಧಾನಸಭೆಯಲ್ಲಿ ನೀಡಿರುವ ಅಧಿಕೃತ ಹೇಳಿಕೆ, ಕರ್ನಾಟಕಕ್ಕೆ ಆಘಾತ ತಂದಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ. ಪಾಟೀಲ, ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ್ದಾರೆ. ಕೇಂದ್ರ ಅರಣ್ಯ ಮತ್ತು ಪರಿಸರ ಖಾತೆ ಸಚಿವ ಭೂಪೇಂದ್ರ ಯಾದವ್, ಯಾವುದೇ ಕಾರಣಕ್ಕೂ ಕೇಂದ್ರ ಸರ್ಕಾರ ಮಹಾದಾಯಿ ಯೋಜನೆಗೆ ಅನುಮೋದನೆ ನೀಡುವುದಿಲ್ಲ ಎಂದು, ಗೋವಾ ಮುಖ್ಯಮಂತ್ರಿಗೆ ತಿಳಿಸಿದ್ದಾಗಿ, ವಿಧಾನಸಭೆಯ ಕಲಾಪದಲ್ಲಿ ಪ್ರಸ್ತಾಪಿಸಿದ ಹಿನ್ನೆಲೆ.. ಕರ್ನಾಟಕದ ಹಿತಾಸಕ್ತಿ ಪರಿಗಣಿಸಿ, ರೈತರ ಹಿತದೃಷ್ಟಿಯಿಂದ ಜನಪರ ಯೋಜನೆ ಅನುಮೋದಿಸುವಂತೆ, ಮುಖ್ಯಮಂತ್ರಿ ಹಾಗೂ ಕಾನೂನು ಖಾತೆ ಸಚಿವರು, ಒತ್ತಾಯಿಸಿದ್ದಾರೆ.

<><><>

**3.** ಭಾರತೀಯ ಖಗೋಳ ಭೌತಶಾಸ್ತ್ರ ಸಂಸ್ಥೆ ಹಾಗೂ ಸರಗೂರಿನ, ಸ್ವಾಮಿ ವಿವೇಕಾನಂದ ಯುತ್ ಮೂವ್ಮೆಂಟ್ ಸಂಸ್ಥೆ ಸಹಯೋಗದಲ್ಲಿ, 8ನೇ ಮೈಸೂರು ವಿಜ್ಞಾನ ನಾಟಕೋತ್ಸವ, ಇಂದಿನಿಂದ 27ರ ವರೆಗೆ, ಮೈಸೂರಿನ ರಾಮಕೃಷ್ಣ ನಗರದ, ರಮಾಗೋವಿಂದ ರಂಗಮಂದಿರದಲ್ಲಿ ಸಂಜೆ, 4.30 ರಿಂದ ಜರುಗಲಿದೆ. ನಾಲ್ಕು ದಿನಗಳ ಕಾಲ, 4 ವಿಜ್ಞಾನ ನಾಟಕಗಳು ಆಯೋಜಿತವಾಗಿವೆ. ಇಂದು, ಸಂಜೆ 6.30ಕ್ಕೆ ಪ್ರಥಮ ನಾಟಕ, ದಿ ಟ್ರಯಲ್ ಆಫ್ ಅಬ್ದುಸ್ ಸಲಾಮ್, ನೀಲಾಂಜನ ಚೌಧರಿ ನಿರ್ದೇಶನದಲ್ಲಿ, ಬೆಂಗಳೂರಿನ ರಿದ್ಧಿ ತಂಡ, ಪ್ರಸ್ತುತ ಪಡಿಸಲಿದೆ. ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಮೈಸೂರು ವಿಜ್ಞಾನ ನಾಟಕೋತ್ಸವ ಟ್ರಸ್ಟ್‌ನ, ಶಶಿಧರ ಡೋಂಗ್ರೆ.

<><><>

ಶಶಿಧರ ಡೋಂಗ್ರೆ ಧ್ವನಿ 40 ಸೆಕೆಂದುಗಳು

<><><>

**4.** ಚಿಕ್ಕಮಗಳೂರು ನಗರಸಭೆ, ಪೌರಾಯುಕ್ತ ಬಿ.ಸಿ.ಬಸವರಾಜ ಅವರ ಅತ್ಯುತ್ತಮ ಕಾರ್ಯಸಾಧನೆಗಾಗಿ, ರಾಜ್ಯ ಸರ್ಕಾರ, ಮೊದಲ ಶ್ರೇಣಿ ಪೌರಾಯುಕ್ತರಾಗಿ, ಬಡ್ತಿ ನೀಡಿ ಆದೇಶಿಸಿದೆ. ಜಿಲ್ಲಾಧಿಕಾರಿ ಮೀನಾ ನಾಗರಾಜ ಅವರು, ಪೌರಾಯುಕ್ತ ಬಸವರಾಜ ಅವರನ್ನು, ತಮ್ಮ ಕಚೇರಿಯಲ್ಲಿ ಅಭಿನಂದಿಸಿದರು.

<><><>

**5.** ನಾಲ್ಕು ಸಾರಿಗೆ ನಿಗಮಗಳ ನೌಕರರ **38** ತಿಂಗಳ ಬಾಕಿ ವೇತನ ಪಾವತಿ, **2024**ರ ವೇತನ ಪರಿಷ್ಕರಣೆ ಜಾರಿಗೆ ಆಗ್ರಹಿಸಿ, ಆಗಸ್ಟ್ **5**ರ ಬೆಳಗ್ಗೆ **6** ರಿಂದ ರಾಜ್ಯಾದ್ಯಂತ, ಅನಿರ್ದಿಷ್ಟಾವಧಿ ಮುಷ್ಕರ ಆರಂಭವಾಗಲಿದೆ ಎಂದು, ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾಮಂಡಳದ ಅಧ್ಯಕ್ಷ ಕೆ.ಎಸ್. ಶರ್ಮಾ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ನಾಲ್ಕು ವರ್ಷಗಳಿಗೊಮ್ಮೆ ಸಾರಿಗೆ ನೌಕರರ ವೇತನ ಪರಿಷ್ಕರಣೆ ಆಗಬೇಕು. **2020** ರಿಂದ ಹೊಸ ವೇತನ ಪರಿಷ್ಕರಣೆಯಾಗಿ, ಜಾರಿಯಾಗಬೇಕಿತ್ತು, ಎಂದರು.

<><><>

**6.** ಮಕ್ಕಳಲ್ಲಿ ಸದಭಿರುಚಿ ಅರಳಿಸಲು, ಜಾನಪದ ಸಂಗೀತ ಕಲಿಕೆ ಸಹಕಾರಿ ಎಂದು, ಬೀದರ್ ಜಿಲ್ಲೆ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಹೇಳಿದ್ದಾರೆ. ಸೇಂಟ್ ಜೋಸೆಫ್ ಕನ್ನಡ ಮಾಧ್ಯಮ ಶಾಲೆಯಲ್ಲಿ, ಬಾಲ ಪ್ರತಿಭೆಗಳ ಪ್ರತಿಭಾ ಪ್ರದರ್ಶನದ, ಚಿಗುರು ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

<><><>

**7.** ರಾಜ್ಯ ಬ್ಯಾರಿ ಸಾಹಿತ್ಯ ಅಕಾದೆಮಿಯ, **2024**ನೇ ಸಾಲಿನ ಗೌರವ ಪ್ರಶಸ್ತಿಗೆ, ಬೆಂಗಳೂರಿನ ಮಕ್ಸೂದ್ ಅಹ್ಮದ್ ಮೂಲ್ಕಿ, ಹೈದರ್ ಅಲಿ ಕಾಟಿಪಳ್ಳ ಹಾಗೂ ಮೂಡಬಿದಿರೆಯ, ಪಿ.ಎಂ. ಹಸನಬ್ಬ ಆಯ್ಕೆಯಾಗಿದ್ದಾರೆ. ಅಕಾದೆಮಿ ಅಧ್ಯಕ್ಷ, ಯು.ಎಚ್.ಉಮರ್, ಪ್ರಶಸ್ತಿ ತಲಾ **50** ಸಾವಿರ ರೂಪಾಯಿ ನಗದು ಹಾಗೂ ಸ್ಮರಣಿಕೆ ಒಳಗೊಂಡಿದೆ; ಆಗಸ್ಟ್ **10** ರಂದು, ಮೈಸೂರಿನಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ, ಎಂದು ಮಂಗಳೂರಿನಲ್ಲಿ ತಿಳಿಸಿದ್ದಾರೆ.

<><><>

**8.** ಉಡುಪಿಯ, ಪರ್ಯಾಯ ಪುತ್ತಿಗೆ ಶ್ರೀ ಕೃಷ್ಣ ಮಠದಿಂದ, ಆಗಸ್ಟ್ **1** ರಿಂದ, ಸೆಪ್ಟೆಂಬರ್ **17**ರ ವರೆಗೆ, ಶ್ರೀ ಕೃಷ್ಣ ಜನ್ಮಾಷ್ಟಮಿ ಮಂಡಲೋತ್ಸವ ನಡೆಯಲಿದೆ. ಪುತ್ತಿಗೆ ಮಠಾಧೀಶ ಸುಗುಣೇಂದ್ರತೀರ್ಥ ಸ್ವಾಮೀಜಿ, ಉಡುಪಿಯಲ್ಲಿ ಮಾಹಿತಿ ನೀಡಿ, ಮಠದ ರಾಜಾಂಗಣದಲ್ಲಿ ನಾಳೆ, ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಚಾಲನೆ ನೀಡಲಿದ್ದಾರೆ; ಅದಮಾರು ಮಠದ ವಿಶ್ವಪ್ರಿಯತೀರ್ಥ ಸ್ವಾಮೀಜಿ, ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ, ಗಣ್ಯರು ಪಾಲ್ಗೊಳ್ಳಲಿದ್ದಾರೆ, ಎಂದರು.

<><><>

**9.** ಬೆಂಗಳೂರಿನ, ಬನ್ನೇರುಘಟ್ಟ ಜೈವಿಕ ಉದ್ಯಾನದ, ನಾಲ್ಕು ಆನೆಗಳು, ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣದಿಂದ, ಜಪಾನ್ ದೇಶಕ್ಕೆ ಇಂದು ಪ್ರಯಾಣ ಬೆಳೆಸಲಿವೆ. ಅಂತಾರಾಷ್ಟ್ರೀಯ ಪ್ರಾಣಿ ವಿನಿಮಯ ಯೋಜನೆ ಅಡಿ, ಒಂದು ಗಂಡು ಹಾಗೂ ಮೂರು ಹೆಣ್ಣಾನೆಗಳು ತೆರಳಲಿವೆ. ಪ್ರತಿಯಾಗಿ, ಜಪಾನ್‌ನಿಂದ ನಾಲ್ಕು ಚೀತಾ, ನಾಲ್ಕು ಪುಮಾ, ಮೂರು ಚಿಂಪಾಂಜಿ ಹಾಗೂ ಎಂಟು ಕ್ಯಾಪುಚಿನ್ ಕೋತಿಗಳು ಬನ್ನೇರುಘಟ್ಟಕ್ಕೆ ಬರಲಿವೆ.

**<><><>**

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ **1** ಗಂಟೆ **10** ನಿಮಿಷಕ್ಕೆ.

ಹರ್ಷ.